ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಅಧಿಸೂಚನೆ

ಕರ್ನಾಟಕದ ವಸತಿ ಶಾಲೆಗಳಲ್ಲಿ / ಸಂಸ್ಥೆಗಳಲ್ಲಿ, 2021-22ನೇ ಶೈಕ್ಷಣಿಕ ಸಾಲಿನ 6ನೇ ತರಗತಿಗೆ ಪ್ರವೇಶಾತಿ

**ಸಂಖ್ಯೆ:** ಇಡಿ/ಕೆಇಎ/ಆಡಳಿತ/ಸಿ.ಆರ್.16/2020-21 **ದಿನಾಂಕ: 22-07-2021**

**ಸರ್ಕಾರದ ಆದೇಶ ಸಂಖ್ಯೆ** ಸಕಇ 94 ಮೊದೇಶಾ 2020 ಬೆಂಗಳೂರು ದಿನಾಂಕ 19-06-2021 ಮತ್ತು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ ಕವಶಿಸಸಂ/ಶಿಕ್ಷಣ(1)/ಸಿಆರ್-18/2020-21 ದಿನಾಂಕ 21-06-2021ರಲ್ಲಿ ಅನ್ವಯ, 2021-22ನೇ ಸಾಲಿಗೆ ಸಂಬಂಧಿಸಿದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ 6ನೇ ತರಗತಿ ಪ್ರವೇಶಕ್ಕೆ ಅಗತ್ಯವಾದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ಅನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲಾಗುವುದು. 5ನೇ ತರಗತಿಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳ ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು, ದಿನಾಂಕ **28-07-2021** ರಿಂದ 10-08-2021ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೂಚಿಸಿದೆ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ದಿನಾಂಕ **16-09-2021** ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರವೇಶ ಪರೀಕ್ಷೆ ನಡೆಸಲಿದೆ. ಅರ್ಜಿ ಸಲ್ಲಿಸಲು ವರ್ಗಾವಾರು ವಾರ್ಷಿಕ ಆದಾಯದ ಮಿತಿ ಕೆಳಕಂಡಂತಿದೆ.

| ಕ್ರ ಸಂ. | ವಿದ್ಯಾರ್ಥಿಯ ವರ್ಗ | ಕುಟುಂಬದ ವಾರ್ಷಿಕ ಆದಾಯ ಮಿತಿ |
|---|---|---|
| 01 | ಪ.ಜಾತಿ/ಪರಿಶಿಷ್ಟ ವರ್ಗ | ರೂ.2,50,000/- |
| 02 | ಹಿಂ.ವರ್ಗದ ಪ್ರವರ್ಗ-1 | ರೂ.2,50,000/- |
| 03 | ಹಿಂ.ವರ್ಗ 2ಎ, 2ಬಿ, 3ಎ ಮತ್ತು 3ಬಿ | ರೂ.1,00,000/- |

ಅರ್ಜಿ ಸಲ್ಲಿಸುವ ವಿಧಾನ, ಹಾಗೂ "ಮಾಹಿತಿ ಪುಸ್ತಕ-2021" ವನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಮತ್ತು ವಸತಿ ಶಿಕ್ಷಣ ಸಂಸ್ಥೆಗಳ ವೆಬ್‌ಸೈಟ್ http://kreis.kar.nic.in ನಲ್ಲಿ ಪ್ರಚುರ ಪಡಿಸಲಾಗಿದೆ. ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ದಿನಾಂಕ **04-09-2021** ರಿಂದ **15-09-2021** ರವರೆಗೆ ಈ ಮೇಲ್ಕಂಡ ವೆಬ್‌ಸೈಟ್‌ಗಳಿಂದ ಆಯಾ ವಸತಿ ಶಾಲೆಯಲ್ಲಿ ಡೌನ್ ಲೋಡ್ ಮಾಡಿಕೊಳ್ಳಬಹುದು.

**ಗಮನಿಸಿ:** ಅಭ್ಯರ್ಥಿಯು ಈಗಾಗಲೇ 5ನೇ ತರಗತಿಯಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವ ಅಥವಾ ಮಾಡುತ್ತಿರುವ ಶಾಲೆಯಿಂದ SATS ಸಂಖ್ಯೆಯನ್ನು ಪಡೆದು ಮತ್ತು ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳನ್ನು ತೆಗೆದುಕೊಂಡು ಅರ್ಜಿ ಸಲ್ಲಿಸುವ ಸಮಯದಲ್ಲಿ ಸಂಬಂಧಿಸಿದ ವಸತಿ ಶಾಲೆಯ ಮುಖ್ಯಸ್ಥರನ್ನು ಸಂಪರ್ಕಿಸಬೇಕು.

ಪ್ರವೇಶ ಪರೀಕ್ಷೆ - 2021ರ ವೇಳಾಪಟ್ಟಿ

| ದಿನಾಂಕ | ದಿನ | ಸಮಯ | ಅಂಕಗಳು |
|---|---|---|---|
| **16-09-2021** | **ಗುರುವಾರ** | ಬೆ.11.00 ರಿಂದ ಮ.1.00 | **100** |

**ವಸತಿ ಶಾಲೆಗಳ ಆಯ್ಕೆಯ ಆದ್ಯತಾ ಕ್ರಮದಲ್ಲಿ ನಮೂದಿಸುವ ಕುರಿತು:** ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಯಾವ ಶಾಲೆಗಳಲ್ಲಿ ದಾಖಲಾತಿ ಬಯಸುತ್ತಾನೋ/ಳೋ, ಅಂತಹ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ಆಯ್ಕೆ ಮಾಡಿಕೊಳ್ಳಬೇಕು. ಆದ್ಯತಾ ಕ್ರಮದಲ್ಲಿ ದಾಖಲಿಸುವ ಶಾಲೆಗಳನ್ನು ಮಾತ್ರ ಹಂಚಿಕೆಗೆ ಪರಿಗಣಿಸಲಾಗುವುದು. ಅಭ್ಯರ್ಥಿಗಳು ತಮ್ಮ ಸೀಟು ಹಂಚಿಕೆ ಅವಕಾಶವನ್ನು ಹೆಚ್ಚಿಸಿಕೊಳ್ಳಲು ತಮ್ಮ ಜಿಲ್ಲೆಯಲ್ಲಿರುವ KREIS ನ ಎಲ್ಲಾ ವಸತಿ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ನಮೂದಿಸತಕ್ಕದು.ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಮೆರಿಟ್, ಮೀಸಲಾತಿ ಹಾಗೂ ಅಭ್ಯರ್ಥಿಗಳು ಪ್ರವೇಶಾತಿಗಾಗಿ ನಮೂದಿಸಿರುವ ಶಾಲೆಗಳ ಆದ್ಯತಾ ಕ್ರಮದ ಆಧಾರದ ಮೇಲೆ Computerised Auto Selection ಮೂಲಕ ಸೀಟು ಹಂಚಿಕೆಯನ್ನು ಮಾಡಲಾಗುವುದು.

ಕೆಇಎ ಸಹಾಯವಾಣಿ ಸಂಖ್ಯೆಗಳು: 080 - 23 460 460 - (ಐದು ಲೈನುಗಳು - ಬೆ. 9.30 ರಿಂದ ಸಂ. 6.00)

ಸಹಿ/-
(ಎಸ್. ರಮ್ಯ, ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012**
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in